**All India Radio: Bangalore**
**01.05.2025 / 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**01.05.2025 / 19.35 hrs**

**<><*<><>*><>**

**ಮುಖ್ಯಾಂಶಗಳು**

**೧. ಮುಂಬೈನಲ್ಲಿಂದು ವಿಶ್ವ ಶ್ರವ್ಯ ದೃಶ್ಯ ಮನರಂಜನಾ ಶೃಂಗಸಭೆಗೆ ಚಾಲನೆ; ಭಾರತದ ಸೃಜನಶೀಲ ಆರ್ಥಿಕತೆಯು ಅಗಾಧ ಸಾಮರ್ಥ್ಯದ ಸದುಪಯೋಗಪಡಿಸಿಕೊಳ್ಳುವಂತೆ ಪ್ರಧಾನಮಂತ್ರಿ ಕರೆ**

**೨. ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿ ಕುರಿತಾದ ನ್ಯಾಯಾಂಗ ತನಿಖೆ ನಡೆಸಬೇಕೆಂದು ಕೋರಿ ಸಲ್ಲಿಸಲಾದ ಪಿಐಎಲ್ ವಿಚಾರಣೆಗೆ ಸುಪ್ರೀಂ ಕೋರ್ಟ್ ನಿರಾಕರಣೆ**

**೩. ನವದೆಹಲಿಯಲ್ಲಿಂದು ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿ ಪ್ರದಾನ**

**೪. ಈ ವರ್ಷ ಸರ್ಕಾರದಿಂದ ಒಟ್ಟು ೨೫೬ ಲಕ್ಷ ಮೆಟ್ರಿಕ್ ಟನ್ ಗೋಧಿ ಖರೀದಿ**

**೫. ಐಪಿಎಲ್ ಟಿ-೨೦ ಕ್ರಿಕೆಟ್ : ರಾಜಸ್ಥಾನ್ ರಾಯಲ್ಸ್ ಮತ್ತು ಮುಂಬೈ ಇಂಡಿಯನ್ಸ್ ನಡುವಿನ ಪಂದ್ಯ ಪ್ರಗತಿಯಲ್ಲಿ**

**<><*<><>*><>**

ಭಾರತ ಇಂದು ಚಲನಚಿತ್ರ ನಿರ್ಮಾಣ, ಡಿಜಿಟಲ್ ಕಂಟೆಂಟ್, ಗೇಮಿಂಗ್, ಫ್ಯಾಷನ್, ಸಂಗೀತ ಮತ್ತು ನೇರ ಸಂಗೀತ ಕಾರ್ಯಕ್ರಮಗಳಿಗೆ ಜಾಗತಿಕ ತಾಣವಾಗಿ ಹೊರಹೊಮ್ಮುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಮುಂಬೈನ ಜಿಯೋ ವರ್ಲ್ಡ್ ಸೆಂಟರ್‌ನಲ್ಲಿಂದು ವಿಶ್ವ ಶ್ರವ್ಯ ದೃಶ್ಯ ಮತ್ತು ಮನರಂಜನಾ ಶೃಂಗಸಭೆ (WAVES) ೨೦೨೫ ಅನ್ನು ಉದ್ಘಾಟಿಸಿದ ನಂತರ ಮಾತನಾಡಿದ ಅವರು, ಜಾಗತಿಕ ಆನಿಮೇಷನ್ ಮಾರುಕಟ್ಟೆಯು ಅಪಾರ ಸಾಮರ್ಥ್ಯವನ್ನು ಹೊಂದಿದ್ದು ಪ್ರಸ್ತುತ ೪೩೦ ಶತಕೋಟಿ ಡಾಲರ್‌ಗಳಿಗಿಂತ ಹೆಚ್ಚಿನ ಮೌಲ್ಯ ಹೊಂದಿದೆ. ಮುಂದಿನ ದಶಕದಲ್ಲಿ ಇದು ದ್ವಿಗುಣಗೊಳ್ಳುವ ನಿರೀಕ್ಷೆಯಿದೆ ಎಂದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೧೬ ಸೆಕೆಂಡ್ಸ್)**

ಇದು ಭಾರತದ ಅನಿಮೇಷನ್ ಮತ್ತು ಗ್ರಾಫಿಕ್ಸ್ ಉದ್ಯಮಕ್ಕೆ ಮಹತ್ವದ ಅವಕಾಶವನ್ನು ಒದಗಿಸುತ್ತದೆ. ಅಂತರರಾಷ್ಟ್ರೀಯ ವ್ಯಾಪ್ತಿ ವಿಸ್ತರಣೆಗೆ ಸಂಬಂಧಿತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು. ಭಾರತದ ಸೃಜನಶೀಲ ಆರ್ಥಿಕತೆಯ ಅಗಾಧ ಸಾಮರ್ಥ್ಯವನ್ನು ಒತ್ತಿ ಹೇಳಿದ ಅವರು, ಮುಂಬರುವ ವರ್ಷಗಳಲ್ಲಿ, ದೇಶದ ಜಿಡಿಪಿಗೆ ಅದರ ಕೊಡುಗೆ ಗಮನಾರ್ಹವಾಗಿ ಹೆಚ್ಚಾಗಲಿದೆ ಎಂದರು.

WAVES ಕೇವಲ ಸಂಕ್ಷಿಪ್ತ ರೂಪವಲ್ಲ, ಅದು ಸಂಸ್ಕೃತಿ, ಸೃಜನಶೀಲತೆ ಮತ್ತು ಸಾರ್ವತ್ರಿಕ ಸಂಪರ್ಕವನ್ನು ಪ್ರತಿನಿಧಿಸುತ್ತದೆ. ಒಂದೇ ವೇದಿಕೆಯಲ್ಲಿ ೧೦೦ ಕ್ಕೂ ಹೆಚ್ಚು ದೇಶಗಳ ಕಲಾವಿದರು, ನಾವಿನ್ಯಕಾರರು, ಹೂಡಿಕೆದಾರರು ಮತ್ತು ನೀತಿ ನಿರೂಪಕರ ಸಮಾಗಮವಾದ WAVES ವಿಶ್ವದ ಗಮನ ಸೆಳೆದಿದೆ. ವೇವ್ಸ್ ಬಜಾರ್ ಉಪಕ್ರಮವನ್ನು ಶ್ಲಾಘಿಸುತ್ತಾ, ಇದು ನಾವಿನ್ಯಕಾರರು ಮತ್ತು ರಚಯಿತರಿಗೆ ಉತ್ತೇಜನ ನೀಡುತ್ತದೆ ಎಂದು ಹೇಳಿದರು. ಭಾರತೀಯ ಚಲನಚಿತ್ರಗಳು ಈಗ ಪ್ರಪಂಚದ ಮೂಲೆ ಮೂಲೆಗಳನ್ನು ತಲುಪುತ್ತಿವೆ. ಭಾರತದ ಚಲನಚಿತ್ರಗಳು ೧೦೦ ಕ್ಕೂ ಹೆಚ್ಚು ದೇಶಗಳಲ್ಲಿ ಬಿಡುಗಡೆಯಾಗುತ್ತಿದ್ದು ದೇಶದಲ್ಲಿ ಒಟಿಟಿ ವಲಯವು ಅಗಾಧವಾದ ಬೆಳವಣಿಗೆಯನ್ನು ಕಂಡಿದೆ. "ಭಾರತದಲ್ಲಿ ರಚಿಸಿ ಮತ್ತು ಜಗತ್ತಿಗಾಗಿ ರಚಿಸಿ" ಗೆ ಇದು ಸೂಕ್ತ ಸಮಯ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

<><*<><>*><>

ಮುಂಬೈನಲ್ಲಿ ನಡೆಯುತ್ತಿರುವ ವೇವ್ಸ್ ಶೃಂಗಸಭೆ ಸಂದರ್ಭದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಅವರು ಶನಿವಾರದಂದು 'ಭಾರತದ ನೇರ ಕಾರ್ಯಕ್ರಮಗಳ ಆರ್ಥಿಕತೆ: ಬೆಳವಣಿಗೆಯ ತಂತ್ರಗಾರಿಕಾ ಮಹತ್ವ' ಕುರಿತಾದ ಪ್ರಥಮ ಶ್ವೇತಪತ್ರವನ್ನು ಅನಾವರಣಗೊಳಿಸಲಿದ್ದಾರೆ. ಇದು ವಲಯದ ನಿರಂತರ ವಿಕಸನಕ್ಕೆ ಕಾರ್ಯತಂತ್ರದ ಶಿಫಾರಸುಗಳನ್ನು ನೀಡುತ್ತಾ, ಪ್ರಗತಿಯ ಪಥಗಳು ಮತ್ತು ಉದಯೋನ್ಮುಖ ಪ್ರವೃತ್ತಿಗಳ ಬಗ್ಗೆ ವಿವರಿಸುತ್ತಾ ಭಾರತದ ವೇಗವಾಗಿ ವಿಸ್ತರಿಸುತ್ತಿರುವ ನೇರ ಪ್ರಸಾರದ ಮನರಂಜನಾ ಉದ್ಯಮದ ಸಮಗ್ರ ವಿಶ್ಲೇಷಣೆಯನ್ನು ಪ್ರಸ್ತುತಪಡಿಸುತ್ತದೆ. ಭಾರತದ ನೇರ ಪ್ರಸಾರದ ಕಾರ್ಯಕ್ರಮಗಳ ವಿನ್ಯಾಸವು ದೇಶದ ಸಾಂಸ್ಕೃತಿಕ ಮತ್ತು ಸೃಜನಶೀಲ ಆರ್ಥಿಕತೆಯ ರಚನಾತ್ಮಕ ಮತ್ತು ಪ್ರಭಾವಶಾಲಿ ಸ್ತಂಭವಾಗಿ ರೂಪಾಂತರಗೊಳ್ಳುತ್ತಿದೆ. ೨೦೨೪ ರಲ್ಲಿ ಸಂಘಟಿತ ನೇರ ಪ್ರಸಾರದ ಕಾರ್ಯಕ್ರಮಗಳ ವಿಭಾಗವು ಶೇಕಡ ೧೫ ರಷ್ಟು ಬೆಳವಣಿಗೆ ದಾಖಲಿಸಿದ್ದು, ಹೆಚ್ಚುವರಿ ೧೩ ಶತಕೋಟಿ ರೂಪಾಯಿ ಆದಾಯ ನೀಡಿದೆ. ಇದು ಭಾರತದ ಮಾಧ್ಯಮ ಮತ್ತು ಮನರಂಜನಾ ರಂಗದಲ್ಲಿ ವೇಗವಾಗಿ ಬೆಳೆಯುತ್ತಿರುವ ವಿಭಾಗಗಳಲ್ಲಿ ಒಂದಾಗಿದೆ. ೨೦೩೦ ರ ವೇಳೆಗೆ ಜಾಗತಿಕ ಅಗ್ರ ಐದು ನೇರ ಪ್ರಸಾರದ ಮನರಂಜನಾ ತಾಣಗಳ ಪೈಕಿ ಸ್ಥಾನ ಪಡೆಯುವ ಗುರಿಯನ್ನು ಭಾರತ ಹೊಂದಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ.

<><*<><>*><>

ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕೆಂದು ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿ - ಪಿಐಎಲ್ ಅನ್ನು ವಿಚಾರಣೆಗೆ ತೆಗೆದುಕೊಳ್ಳಲು ಸುಪ್ರೀಂ ಕೋರ್ಟ್ ಇಂದು ನಿರಾಕರಿಸಿದೆ. ಇಂತಹ ಕ್ರಮಗಳು ನಿರ್ಣಾಯಕ ಸಮಯದಲ್ಲಿ ಸಶಸ್ತ್ರ ಪಡೆಗಳ ಸ್ಥೈರ್ಯ ಕುಗ್ಗಿಸಬಹುದು ಎಂದು ನ್ಯಾಯಾಲಯ ಎಚ್ಚರಿಸಿದೆ. ವಿಷಯದ ಸೂಕ್ಷ್ಮತೆಯನ್ನು ಅರಿತು ಅರ್ಜಿ ಸಲ್ಲಿಸಬೇಕೆಂದು ಹೇಳಿರುವ ಸರ್ವೋಚ್ಚ ನ್ಯಾಯಾಲಯ, ದೂರುದಾರರು ಅರ್ಜಿಯನ್ನು ಹಿಂಪಡೆಯುವಂತೆ ಸೂಚಿಸಿದೆ. ಜಮ್ಮು ಮತ್ತು ಕಾಶ್ಮೀರದ ಮೂವರು ನಿವಾಸಿಗಳು ಸಲ್ಲಿಸಿದ್ದ ಪಿಐಎಲ್ ಅನ್ನು ನಂತರ ಹಿಂಪಡೆಯಲಾಯಿತು.

<><*<><>*><>

ಜಮ್ಮು ಮತ್ತು ಕಾಶ್ಮೀರದ ನಿಯಂತ್ರಣ ರೇಖೆಯುದ್ದಕ್ಕೂ ಪಾಕಿಸ್ತಾನ ಅಪ್ರಚೋದಿತ ಗುಂಡಿನ ದಾಳಿ ನಡೆಸಿ ಸತತ ಏಳನೇ ರಾತ್ರಿಯೂ ಕದನ ವಿರಾಮವನ್ನು ಉಲ್ಲಂಘಿಸಿದೆ. ಪಾಕಿಸ್ತಾನ ಸೇನೆಯ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿಗೆ ಭಾರತೀಯ ಸೇನೆಯು ತಕ್ಕ ಪ್ರತ್ಯುತ್ತರ ನೀಡಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ. ಕುಪ್ವಾರಾ, ಉರಿ ಮತ್ತು ಅಖ್ನೂರ್ ವಲಯಗಳ ಎದುರಿನ ಪ್ರದೇಶಗಳಲ್ಲಿ ಪಾಕಿಸ್ತಾನ ಸೇನಾ ನೆಲೆಗಳು ನಿಯಂತ್ರಣ ರೇಖೆಯಾದ್ಯಂತ ಅಪ್ರಚೋದಿತ ದಾಳಿ ನಡೆಸಿದ್ದು ಭಾರತ ಕೂಡ ಪ್ರತಿದಾಳಿ ಮಾಡಿದೆ ಎಂದು ಭಾರತೀಯ ಸೇನೆ ತಿಳಿಸಿದೆ.

<><*<><>*><>

ನವದೆಹಲಿಯಲ್ಲಿ ಇಂದು ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಅವರು ಬ್ಯಾಡ್ಮಿಂಟನ್ ಚಾಂಪಿಯನ್‌ಗಳಾದ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಅವರಿಗೆ ೨೦೨೩ ರ ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಿದರು. ಈ ಪ್ರಶಸ್ತಿಯು ಆಟಗಾರರ ಸಮರ್ಪಣೆ ಮತ್ತು ಕ್ರೀಡಾ ಅಂಗಳದಲ್ಲಿನ ಅಸಾಧಾರಣ ಪ್ರದರ್ಶನಗಳಿಗೆ ಸಾಕ್ಷಿಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಸಚಿವರು, ಅವರ ಭವಿಷ್ಯದ ಪಂದ್ಯಗಳಿಗೆ ಶುಭ ಹಾರೈಸಿದ್ದಾರೆ.

<><*<><>*><>

ಈ ವರ್ಷ ಸರ್ಕಾರ ಒಟ್ಟು ೨೫೭ ಲಕ್ಷ ಮೆಟ್ರಿಕ್ ಟನ್ ಹೊಸ ಋತುವಿನ ಗೋಧಿಯನ್ನು ಖರೀದಿಸಿದೆ ಎಂದು ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಕಾರ್ಯದರ್ಶಿ ಸಂಜೀವ್ ಛೋಪ್ರಾ ಹೇಳಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ೩೧೨ ಲಕ್ಷ ಮೆಟ್ರಿಕ್ ಟನ್ ಖರೀದಿ ಗುರಿಯನ್ನು ಈ ವರ್ಷಾಂತ್ಯದ ವೇಳೆಗೆ ಸಾಧಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಹೇಳಿದ್ದಾರೆ. ಆನ್‌ಲೈನ್ ನೋಂದಣಿ, ಸಕಾಲಿಕ ತೂಕ ಮಾಡುವ ಪ್ರಕ್ರಿಯೆ ಮತ್ತು ೪೮ ಗಂಟೆಗಳ ಒಳಗೆ ಕನಿಷ್ಠ ಬೆಂಬಲ ಬೆಲೆ ಪಾವತಿಯ ಸಂಪೂರ್ಣ ಸೌಲಭ್ಯವನ್ನು ರೈತರು ಪಡೆಯುತ್ತಿದ್ದು ಈಗ ಗೋಧಿ ಸಂಗ್ರಹಣೆ ಸುಲಭವಾಗಿದೆ ಎಂದು ಅವರು ಹೇಳಿದ್ದಾರೆ. ಸಕ್ಕರೆ ನಿಯಂತ್ರಣ ಆದೇಶದ ಕುರಿತು ಮಾತನಾಡಿದ ಅವರು, ಈ ಹಿಂದೆ ಸರ್ಕಾರವು ದತ್ತಾಂಶವನ್ನು ಸಕ್ಕರೆ ಕಾರ್ಖಾನೆಗಳಿಂದ ಭೌತಿಕವಾಗಿ ಪಡೆಯುತ್ತಿತ್ತು, ಆದರೆ ಈಗ, ಇಆರ್‌ಪಿ-ಎಂಟರ್‌ಪ್ರೈಸ್ ರಿಸೋರ್ಸ್ ಪ್ಲಾನಿಂಗ್ ವ್ಯವಸ್ಥೆಯೊಂದಿಗೆ ಕಚ್ಚಾ ವಸ್ತುಗಳ ಸಂಗ್ರಹಣೆಯಿಂದ ಹಿಡಿದು ಸಿದ್ಧಪಡಿಸಿದ ಉತ್ಪನ್ನ ವಿತರಣೆಯವರೆಗೆ ಸಕ್ಕರೆ ಕಾರ್ಖಾನೆಯ ಕಾರ್ಯಾಚರಣೆಯ ವಿವಿಧ ಅಂಶಗಳು ದೊರೆಯಲಿವೆ ಎಂದು ವಿವರಿಸಿದ್ದಾರೆ.

<><*<><>*><>

ಕರ್ನಾಟಕ ಶಾಲಾ ಪರೀಕ್ಷಾ ಮತ್ತು ಮೌಲ್ಯಮಾಪನ ಮಂಡಳಿ ನಡೆಸಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆ- ೧ ರ ಫಲಿತಾಂಶ ನಾಳೆ ಪ್ರಕಟವಾಗಲಿದೆ. ಶಿಕ್ಷಣ ಸಚಿವ ಮಧುಬಂಗಾರಪ್ಪ ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಲಿದ್ದಾರೆ. ಮಧ್ಯಾಹ್ನ ೧೨.೩೦ ರ ನಂತರ ಜಾಲತಾಣದಲ್ಲಿ ಫಲಿತಾಂಶ ಲಭ್ಯವಾಗಲಿದೆ.

karresults.nic.in ಜಾಲತಾಣದಲ್ಲಿ ಫಲಿತಾಂಶ ನೋಡಬಹುದಾಗಿದೆ.  ಎಸ್‌ಎಮ್‌ಎಸ್ ಮೂಲಕವೂ ಫಲಿತಾಂಶ ಪಡೆಯಬಹುದಾಗಿದ್ದು, ಏಂಖ ೧೦  ಎಂದು ಟೈಪ್ ಮಾಡಿ ಸ್ಪೇಸ್ ಬಿಟ್ಟು ನೋಂದಣಿ ಸಂಖ್ಯೆ ಟೈಪ್ ಮಾಡಿ ೫೬೨೬೩ ಕ್ಕೆ ಸಂದೇಶ ಕಳುಹಿಸಿದರೆ, ಫಲಿತಾಂಶವನ್ನು ಅದೇ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುತ್ತದೆ. ಈ ಬಾರಿ ೮ ಲಕ್ಷದ ೯೬ ಸಾವಿರದ ೪೪೭ ವಿದ್ಯಾರ್ಥಿಗಳು ಎಸ್ ಎಸ್ ಎಲ್ ಸಿ ಪರೀಕ್ಷೆಗೆ ಹಾಜರಾಗಿದ್ದರು.

**<><*<><>*><>**

ಕೇಂದ್ರ ಸರ್ಕಾರದ ಜಾತಿ ಗಣತಿ ನಿರ್ಧಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾಗತಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು ಜಾತಿಗಣತಿಯೊಂದಿಗೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆಯೂ ನಡೆಯಬೇಕು ಎಂದು ಆಗ್ರಹಿಸಿದ್ದಾರೆ.  ದೇಶದ ಜನತೆಗೆ ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಮೀಸಲಾತಿಯಲ್ಲಿ ಶೇಕಡ ೫೦ ರಷ್ಟು ಗರಿಷ್ಠ ಪರಿಮಿತಿಯನ್ನು ಸಡಿಲಗೊಳಿಸಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಕಲ್ಪಿಸಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಜೈಪುರದ ಸವಾಯ್ ಮಾನ್ ಸಿಂಗ್ ಕ್ರೀಡಾಂಗಣದಲ್ಲಿ ನಡೆದಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<><>*><>**

ಭಾರತೀಯ ಆಡಳಿತ ಸೇವೆ (ಐಎಎಸ್) ನ ೧೯೮೯ ಬ್ಯಾಚ್ ಅಧಿಕಾರಿ ಸುಜಾತಾ ಚತುರ್ವೇದಿ ಅವರು ಇಂದು ನವದೆಹಲಿಯಲ್ಲಿ ಕೇಂದ್ರ ಲೋಕಸೇವಾ ಆಯೋಗದ (ಯುಪಿಎಸ್‌ಸಿ) ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಚತುರ್ವೇದಿ ಅವರು ಕೇಂದ್ರ ಮತ್ತು ರಾಜ್ಯಗಳ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**